1589 (1713) ಶ್ರೀ ಲಾಲಾಜಿ ಆರ್. ಮೆಂಡನ್ [ಕಾಪು] :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಸರ್ಕಾರಿ ಶಿಕ್ಷಕರ ಮತ್ತು ಶಿಕ್ಷಕೇತರ ಬಡ್ತಿ ನಿಯಮ ಒಂದೇ ರೀತಿಯಲ್ಲಿ ತರುವುದಕ್ಕೆ ಕಾನೂನಿನ ತೊಡಕಿದೆಯೇ;

ಆ) ಹಾಗಿದ್ದಲ್ಲಿ, 2007–08ನೇ ಸಾಲಿನಿಂದ ಆದೇಶಿಸಲಾಗುವುದೇ?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಹೌದು. ವೃಂದ ಮತ್ತು ನೇಮಕಾತಿ ಹಾಗೂ ಬಡ್ತಿ ನಿಯಮಗಳು ಬೇರೆ ಬೇರೆಯಾಗಿರುತ್ತದೆ.

ಆ) ವೃಂದ ಮತ್ತು ನೇಮಕಾತಿ ಹಾಗೂ ಬಡ್ತಿ ನಿಯಮಗಳು ಬೇರೆ ಬೇರೆಯಾಗಿರುವುದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ.

1591 (1715) ಶ್ರೀ ಲಾಲಾಜಿ ಆರ್. ಮೆಂಡನ್ (ಕಾಪು) :– ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾಪು ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ಕಾರಿ ಹಾಗೂ ಖಾಸಗಿ ಪಾಲಿಟೆಕ್ನಿಕ್ ಕಾಲೇಜ್ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹೌದಾದಲ್ಲಿ, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಮೆಕ್ಯಾನಿಕಲ್, ಇಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಷಯಗಳ ವಿಭಾಗಗಳಿಗೂ ಮಂಜೂರಾತಿ ನೀಡಲಾಗುವುದೇ?

ಶ್ರೀ ಡಿ.ಎಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು.

ಆ) ಮುಂದಿನ ಆರ್ಥಿಕ ವರ್ಷದಲ್ಲಿನ ಆಯವ್ಯಯವನ್ನು ಗಮನದಲ್ಲಿಟ್ಟುಕೊಂಡು ಕಾಪು ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಪ್ರಾರಂಭಿಸಲು ಪರಿಶೀಲಿಸಲಾಗುವುದು.